# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 708 |
| ಉತ್ತರಿಸಬೇಕಾದ ದಿನಾಂಕ | : | 04.03.2021. |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ ಎರಡು ವರ್ಷಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಯುವ ಸಬಲೀಕರಣಕ್ಕಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಯುವ ಸಬಲೀಕರಣಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಹಮ್ಮಿಕೊಳ್ಳಾದ ಕಾರ್ಯಕ್ರಮಗಳು ಹಾಗೂ ವೆಚ್ಚದ ವಿವರ ಕೆಳಕಂಡಂತಿದೆ:- |

| ಕಾರ್ಯಕ್ರಮದ ವಿವರ | ವೆಚ್ಚ (ರೂ. ಲಕ್ಷಗಳಲ್ಲಿ) | |
|---|---|---|
| | 2018-19 | 2019-20 |
| ನಮ್ಮೂರ ಶಾಲೆಗೆ ನಮ್ಮ ಯುವಜನರು | 166.00 | 227.00 |
| ಯುವ ಸ್ಪಂದನ | 200.00 | 150.00 |
| ಯುವ ಚೈತನ್ಯ | 316.85 | 299.70 |
| ಯುವಜನೋತ್ಸವ | 40.00 | 50.00 |
| ಯುವಜನ ಮೇಳ | 60.00 | 40.00 |
| ಯುವ ಶಕ್ತಿ ಕೇಂದ್ರ | 242.23 | - |
| ಯುವ ಸಹಾಯವಾಣಿ | 199.90 | - |
| ಯುವ ಸಮ್ಮೇಳನ, ಕಾರ್ಯಾಗಾರ ಮತ್ತು ತರಬೇತಿ | 55.00 | - |
| ಕರ್ನಾಟಕ ಕುಸ್ತಿ ಹಬ್ಬ | 200.00 | 200.00 |
| ತೀರ್ಪುಗಾರರ ಕಮ್ಮಟ | - | 15.00 |
| ಗ್ರಾಮೀಣ ಕ್ರೀಡೋತ್ಸವ | - | 233.00 |
| ಯುವ ಕ್ರೀಡಾ ಮಿತ್ರ | - | 139.45 |
| **ಒಟ್ಟು** | **1479.98** | **1354.15** |

--2)

| | | |
|---|---|---|
| ಆ. | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನಡೆಸಲಾಗಿರುವ ಕಾರ್ಯಕ್ರಮಗಳೆಷ್ಟು; ಕಾರ್ಯಕ್ರಮಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಯಾವ ರೀತಿ ನೀಡಲಾಗುತ್ತದೆ ; | ಮೈಸೂರು ಜಿಲ್ಲೆಯಲ್ಲಿ ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಅಂಗವಾಗಿ 'ರಾಷ್ಟ್ರೀಯ ಯುವ ಸಪ್ತಾಹ' ಕಾರ್ಯಕ್ರಮ; ಯುವ ಸಂಪರ್ಕ ಸಭೆ; ಯುವಜನರ ಕಲಾ ಪ್ರತಿಭೆಯನ್ನು ಪ್ರದರ್ಶಿಸಲು 'ಯುವಜನೋತ್ಸವ' ಕಾರ್ಯಕ್ರಮ ಮತ್ತು ಯುವಜನರಲ್ಲಿ ಜನಪದ ಸೊಗಡನ್ನು ಬಿಂಬಿಸುವಂತೆ ಮಾಡಲು 'ಯುವಜನ ಮೇಳ' ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ.<br><br>ಚಾಮರಾಜನಗರ ಜಿಲ್ಲೆಯಲ್ಲಿ 15-29ರ ವಯೋಮಿತಿಯೊಳಗಿನ ಯುವಕ/ಯುವತಿಯರಿಗೆ ಸಾಂಸ್ಕೃತಿಕ ಸ್ಪರ್ಧೆಗಳನ್ನು ಪ್ರದರ್ಶಿಸಲು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ; ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟವನ್ನು ಆಯೋಜನೆ ಮಾಡಲಾಗಿದೆ. ಯುವಕ/ಯುವತಿಯರಿಗೆ ಮಹದೇಶ್ವರ ಬೆಟ್ಟದಿಂದ ನಾಗುಮಲೆಗೆ ಚಾರಣವನ್ನು ಆಯೋಜಿಸಲಾಗಿರುತ್ತದೆ.<br>ಪತ್ರಿಕಾ ಪ್ರಕಟಣೆಗಳ ಮೂಲಕ ಸಾರ್ವಜನಿಕರಿಗೆ ಇಲಾಖಾ ಕಾರ್ಯಕ್ರಮಗಳ ಕುರಿತು ಮಾಹಿತಿಗಳನ್ನು ನೀಡಲಾಗುತ್ತಿದೆ. |
| ಇ. | ಕ್ರೀಡೆಗಳಿಗೆ ಸಂಬಂಧಿಸಿದಂತೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ? | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕ್ರೀಡೆಗಳಿಗೆ ಸಂಬಂಧಿಸಿದಂತೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |

**ವೈಎಸ್‌ಡಿ-ಇಬಿಬಿ/12/2021.**

**(ಡಾ|| ನಾರಾಯಣ ಗೌಡ)**
ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.

# ಅನುಬಂಧ

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಹಮ್ಮಿಕೊಂಡಿರುವ ಕ್ರೀಡಾ ಕಾರ್ಯಕ್ರಮಗಳ ವಿವರ

1. **ಕ್ರೀಡಾಶಾಲೆ/ನಿಲಯಗಳು** : ರಾಜ್ಯದಲ್ಲಿ ಒಟ್ಟು 34 ಕ್ರೀಡಾಶಾಲೆ/ನಿಲಯಗಳಿದ್ದು, ಇವುಗಳಿಗೆ ಪ್ರವೇಶ ನೀಡುವ ಸಂಬಂಧ ತಾಲ್ಲೂಕು, ಜಿಲ್ಲಾ, ವಿಭಾಗ ಮತ್ತು ರಾಜ್ಯಮಟ್ಟದಲ್ಲಿ ಆಯ್ಕೆ ಶಿಬಿರಗಳನ್ನು ನಡೆಸಿ ಕ್ರೀಡಾಪಟುಗಳ ದೈಹಿಕ ಕ್ಷಮತೆಯನ್ನು ಪರೀಕ್ಷಿಸಿ ಅರ್ಹ ಕ್ರೀಡಾಪಟುಗಳಿಗೆ ಕ್ರೀಡಾಶಾಲೆ/ನಿಲಯಗಳಿಗೆ ಪ್ರವೇಶ ನೀಡಿ ಉಚಿತವಾಗಿ ವಸತಿ ವ್ಯವಸ್ಥೆ, ಊಟೋಪಹಾರ, ಕ್ರೀಡಾ ತರಬೇತಿ, ಕ್ರೀಡಾಗಂಟು, ವೈದ್ಯಕೀಯ ವೆಚ್ಚ, ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳಲು ಪ್ರಯಾಣ ಭತ್ಯೆ ನೀಡಲಾಗುತ್ತಿದೆ.
2. **ಕ್ರೀಡಾಪಟುಗಳಿಗೆ ಪ್ರೋತ್ಸಾಹ** : ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ ಹಾಗೂ ಕ್ರೀಡಾ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ.
3. **ವೃತ್ತಿಪರ ಕೋರ್ಸ್ ಗೆ ಕ್ರೀಡಾಪಟುಗಳ ಪ್ರವೇಶ** : ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಕ್ರೀಡಾ ಮೀಸಲಾತಿಯಡಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವೃತ್ತಿಪರ ಕೋರ್ಸ್ ಗಳಲ್ಲಿ ಪ್ರವೇಶ ನೀಡಲಾಗುತ್ತಿದೆ.
4. **ಸಾಧಕರಿಗೆ ಪ್ರಶಸ್ತಿ** : ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಕ್ರೀಡೆಯನ್ನು ಪ್ರೋತ್ಸಾಹಿಸುತ್ತಿರುವ ಸಂಸ್ಥೆಗಳಿಗೆ ಕ್ರೀಡಾ ಪೋಷಕ ಪ್ರಶಸ್ತಿ ನೀಡಲಾಗುತ್ತಿದೆ ಹಾಗೂ ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾ ಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.
5. **ಕ್ರೀಡಾಪಟುಗಳ ಮಾಸಾಶನ** : ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಸಾಧನೆಗೈದ, 50 ವರ್ಷಕ್ಕಿಂತ ಹೆಚ್ಚು ವಯೋಮಾನದ ಪ್ರಸ್ತುತ ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕ್ರೀಡಾಪಟುಗಳಿಗೆ ಇಲಾಖೆಯಿಂದ ಮಾಸಾಶನವನ್ನು ನೀಡಲಾಗುತ್ತಿದೆ.
6. **ಕ್ರೀಡಾಪಟುಗಳ ಉತ್ತೇಜನ** : ಕೇಂದ್ರ ಸರ್ಕಾರ ಪುರಸ್ಕೃತ ಅರ್ಜುನ, ಧ್ಯಾನಚಂದ್, ದ್ರೋಣಾಚಾರ್ಯ ಹಾಗೂ ರಾಜೀವ್ ಗಾಂಧಿ ಖೇಲ್ ರತ್ನ ಪ್ರಶಸ್ತಿಗಳಿಗೆ ಇಲಾಖೆಯಿಂದ ರಾಜ್ಯದ ಕ್ರೀಡಾಪಟುಗಳನ್ನು ಶಿಫಾರಸ್ಸು ಮಾಡಲಾಗುತ್ತಿದೆ. ಸದರಿ ಪ್ರಶಸ್ತಿ ಪುರಸ್ಕೃತರಾದ ರಾಜ್ಯದ ಕ್ರೀಡಾಪಟುಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯವನ್ನು ನೀಡಲಾಗುತ್ತಿದೆ.
7. **ಸಿ.ಎಂ.ದಸರಾ ಕಪ್** : ನಾಡಹಬ್ಬ ದಸರಾ ಅಂಗವಾಗಿ ಇಲಾಖೆಯ ವತಿಯಿಂದ ಪ್ರತಿ ವರ್ಷ ದಸರಾ ಕ್ರೀಡಾಕೂಟವನ್ನು ತಾಲ್ಲೂಕು, ಜಿಲ್ಲಾ, ವಿಭಾಗ ಮತ್ತು ರಾಜ್ಯಮಟ್ಟದವರೆಗೆ ಯಾವುದೇ ವಯೋಮಿತಿ ಇಲ್ಲದೇ ಮುಕ್ತ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ.

8. **ಖೇಲೋ ಇಂಡಿಯಾ ಯೋಜನೆ**: ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಯೋಜನೆಯಡಿಯಲ್ಲಿ ಕ್ರೀಡಾ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರವು ಶೇ.100% ರಷ್ಟು ಅನುದಾನವನ್ನು ನೀಡುತ್ತಿದೆ. ಖೇಲೋ ಇಂಡಿಯಾ ರಾಜ್ಯಮಟ್ಟದ ಉತ್ಕೃಷ್ಟತಾ ಕೇಂದ್ರ ಮತ್ತು ಖೇಲೋ ಇಂಡಿಯಾ ಸೆಂಟರ್ ಗಳನ್ನು ತೆರೆಯಲು ಅನುದಾನ ನೀಡುತ್ತಿದೆ.
9. **ಕ್ರೀಡಾ ಸಂಸ್ಥೆಗಳಿಗೆ ಪ್ರೋತ್ಸಾಹ** :ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆಗೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.
10. **ವಿವಿಧ ಸಾಹಸ ಕಾರ್ಯಕ್ರಮಗಳು** : ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ವತಿಯಿಂದ ಭೂ ಸಾಹಸ, ಜಲಸಾಹಸ, ಹಾಗೂ ವಾಯು ಸಾಹಸ ಕಾರ್ಯಕ್ರಮಗಳನ್ನು ಸಂಘಟಿಸಲಾಗುತ್ತಿದೆ.
11. **ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ :** ಪರಿಶಿಷ್ಟ ಜಾತಿ/ ಪಂಗಡದ ಯುವಜನರಿಗೆ/ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ, ಕ್ರೀಡಾ ವಿಜ್ಞಾನ ಸೇವೆಯನ್ನು ಪಡೆದ ಕ್ರೀಡಾಪಟುಗಳಿಗೆ ಮರು ಪಾವತಿ ಸೌಲಭ್ಯ, ಜಿಮ್ ಸ್ಥಾಪನೆಗಾಗಿ ಸಹಾಯಧನ ನೀಡಲಾಗುತ್ತಿದೆ.